# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 575

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

ಉತ್ತರಿಸಬೇಕಾದ ದಿನಾಂಕ : 23-12-2022.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ತೋಟಗಾರಿಕೆ ಇಲಾಖೆ ಮೂಲಕ ಕೃಷಿ ಸಿಂಚನ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ: | ತೋಟಗಾರಿಕೆ ಇಲಾಖೆ ಮೂಲಕ 2021-22ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ಒಟ್ಟು 2136.31 ಹೆಕ್ಟೇರ್ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ. |
| ಆ | ಈ ಯೋಜನೆಯ ಅನುಷ್ಠಾನಕ್ಕೆ ಯಾವ ಯಾವ ತೋಟಗಾರಿಕೆ ಬೆಳೆಗಳನ್ನು ಆಯ್ಕೆ ಮಾಡಲಾಗಿದೆ: | ಈ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ದ್ರಾಕ್ಷಿ, ದಾಲಿಂಬೆ, ನಿಂಬೆ, ಬದನೆ, ಬಾಳೆ, ಪೇರು, ಪಪ್ಪಾಯ, ಕಲ್ಲಂಗಡಿ, ಟೊಮಾಟೋ, ಮೆಣಸಿನಕಾಯಿ, ಈರುಳ್ಳಿ ಹಾಗೂ ಇತರೆ ತೋಟಗಾರಿಕೆ ಬೆಳೆಗಳಿಗೆ ಸಹಾಯಧನವನ್ನು ಒದಗಿಸಲಾಗಿದೆ. ಸಹಾಯಧನಕ್ಕಾಗಿ ಕಾಫೀ, ಟೀ, ರಬ್ಬರ್ ಬೆಳೆಗಳನ್ನು ಹೊರತುಪಡಿಸಿ ಉಳಿದೆಲ್ಲಾ ತೋಟಗಾರಿಕೆ ಬೆಳೆಗಳನ್ನು ಆಯ್ಕೆ ಮಾಡಲಾಗಿದೆ. |
| ಇ | ಯಾವ ಯಾವ ತಾಲ್ಲೂಕುಗಳಲ್ಲಿ ಈ ಯೋಜನೆಯು ಅನುಷ್ಠಾನ ಗೊಂಡಿದೆ; ಸದರಿ ಯೋಜನೆಗೆ ಇರುವ ಮಾನದಂಡಗಳೇನು? (ವಿವರ ಒದಗಿಸುವುದು) | ವಿಜಯಪುರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಾದ, ಬಬಲೇಶ್ವರ, ತಿಕೋಟ, ಇಂಡಿ, ಚಡಚಣ, ಸಿಂದಗಿ, ದೇವರಹಿಪ್ಪರಗಿ, ಅಲಮೇಲು, ವಿಜಯಪುರ, ಬಸವನಬಾಗೇವಾಡಿ, ನಿಡಗುಂದಿ, ಕೋಲ್ಹಾರ, ಮುದ್ದೇಬಿಹಾಳ ಮತ್ತು ತಾಳಿಕೋಟೆ ಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿದೆ.<br>**ಸದರಿ ಯೋಜನೆಗೆ ಇರುವ ಮಾನದಂಡಗಳು ಈ ಕೆಳಕಂಡಂತಿದೆ.**<br>1. ಫಲಾನುಭವಿಗಳು ರೈತರಾಗಿದ್ದು, ಜಮೀನು ಅವರ ಹೆಸರಿನಲ್ಲಿರಬೇಕು ಹಾಗೂ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಾಗಿರಬೇಕು ಅಥವ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಉದ್ದೇಶಿಸಿರಬೇಕು.<br>2. ರೈತರ ತಾಕಿನಲ್ಲಿ ನೀರಾವರಿ ಸೌಲಭ್ಯದ ಮೂಲ ಇರಬೇಕು |

| | |
|---|---|
| | ಹಾಗೂ ಹನಿ/ತುಂತುರು ನೀರಾವರಿಗೆ ಯೋಗ್ಯವಿರುವಂತಹ ನೀರನ್ನು ಹೊಂದಿರಬೇಕು.<br>3. ಹನಿ/ತುಂತುರು ನೀರಾವರಿ ಘಟಕಗಳು ಕಾರ್ಯನಿರ್ವಹಿಸಲು ಅವಶ್ಯವಿರುವ ವಿದ್ಯುಚ್ಛಕ್ತಿ ಅಥವಾ ಇತರೆ ಶಕ್ತಿಮೂಲಗಳನ್ನು ಹೊಂದಿರಬೇಕು.<br>4. ತನ್ನ ಸ್ವಂತ ನೀರಾವರಿ ಮೂಲ ಇಲ್ಲದಿದ್ದಲ್ಲಿ ಬೇರೆ ರೈತರಿಂದ ಈ ಸಂಬಂಧ ಒಪ್ಪಿಗೆ ಪತ್ರ ಪಡೆದು ಸಲ್ಲಿಸಬೇಕು.<br>5. ಪ್ರತಿ ಫಲಾನುಭವಿ ಕುಟುಂಬಕ್ಕೆ 5 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ನೀಡಲಾಗುತ್ತಿದೆ.<br>6. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ 2.00 ಹೆಕ್ಟೇರ್‌ವರೆಗೆ ಶೇ.90ರಷ್ಟು ಹಾಗೂ ಇತರೆ ರೈತರಿಗೆ 2.00 ಹೆಕ್ಟೇರ್‌ವರೆಗೆ ಶೇ.75 ರಷ್ಟು ಮತ್ತು 2.00 ಹೆಕ್ಟೇರ್ ಮೇಲ್ಪಟ್ಟು 5.00 ಹೆಕ್ಟೇರ್‌ವರೆಗೂ ಶೇ.45 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ. |

HORTI 597 HGM 2022

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು